ಮಾಧ್ಯಮ ಮಾಹಿತಿ:

#Project Shivajinagar ಘನತ್ಯಾಜ್ಯ ವಿಲೇವಾರಿ ನೂತನ ಮಾದರಿಯ ಯೋಜನೆಗೆ ಮಾನ್ಯ ಸ್ಥಳೀಯ ಶಾಸಕರು ಮತ್ತು ಮಾನ್ಯ ಆಯುಕ್ತರು ರವರಿಂದ ಚಾಲನೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಶಿವಾಜಿನಗರದಲ್ಲಿ ಘನತ್ಯಾಜ್ಯ ವಿಲೇವಾರಿ ನೂತನ ಮಾದರಿಯ ಯೋಜನೆ ಜಾರಿ ಮಾಡುವ ಸಂಬಂಧ #ProjectShivajinagar ಯೋಜನೆಗೆ ಇಂದು ಮಾನ್ಯ ಸ್ಥಳೀಯ ಶಾಸಕರು ಶ್ರೀ ರಿಜ್ವಾನ್ ಹರ್ಷದ್, ಮಾನ್ಯ ಆಯುಕ್ತರು ಶ್ರೀ ಎನ್.ಮಂಜುನಾಥ್ ಪ್ರಸಾದ್ ರವರು ಶಿವಾಜಿನಗರದ ಪೊಲೀಸ್ ಕ್ವಾಟ್ರಸ್ ಬಳಿಯ ಗೋಡೆಗೆ ಬಣ್ಣ ಬಳಿಯುವ ಹಾಗೂ ಕೂರಲು ಹಾಸನಗಳ ವ್ಯವಸ್ಥೆ ಮಾಡಿರುವ ಸ್ಥಳದಲ್ಲಿ ಕರ್ಬ್ಸ್ ಅಳವಡಿಸುವ ಮೂಲಕ ಚಾಲನೆ ನೀಡಿದರು. ಈ ವೇಳೆ ಜಂಟಿ ಆಯುಕ್ತರು(ಘನತ್ಯಾಜ್ಯ) ಶ್ರೀ ಸರ್ಫರಾಜ್ ಖಾನ್ ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಶಿವಾಜಿನಗರವನ್ನು ಸ್ವಚ್ಛಗೊಳಿಸುವ ಉದ್ದೇಶದಿಂದ ವಿನೂತನ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ. ಇದರಿಂದ ಶಿವಾಜಿನಗರ ವ್ಯಾಪ್ತಿಯಲ್ಲಿ ಕಸಮುಕ್ತವಾಗಿಸಲು ಹಲವು ಯೋಜನೆಗಳನ್ನು ರೂಪಿಸಿಕೊಂಡಿದ್ದು, ಅದಕ್ಕೆ ಸ್ಥಳೀಯ ನಾಗರಿಕರ ಸಹಕಾರ ಪ್ರಮುಖ ಪಾತ್ರವಹಿಸಲಿದೆ ಎಂದು ಶಾಸಕರು ಶ್ರೀ ರಿಜ್ವಾನ್ ಹರ್ಷದ್ ರವರು ತಿಳಿಸಿದರು.

ಶಿವಾಜಿನಗರದಲ್ಲಿ ಕಸ ಸಮಸ್ಯೆ ದೊಡ್ಡ ಸಮಸ್ಯೆಯಾಗಿದೆ. ಎಲ್ಲೆಂದರಲ್ಲಿ ಕಸ ಬಿಸಾಡುತ್ತಾರೆ. ಈ ಸಂಬಂಧ ರಸ್ತೆ ಬದಿ ಕಸ ಬಿಸಾಡುವ ಸ್ಥಳಗಳನ್ನು ಗುರುತಿಸಿ ಆ ಸ್ಥಳದಲ್ಲಾಕಿರುವ ಕಸ ತೆರವು ಮಾಡಿ ಸುಂದರೀಕರಣ ಮಾಡಲಾಗುತ್ತಿದೆ. ಒಂದು ಬಾರಿ ಸುಂದರಗೊಳಿಸಿದ ಬಳಿಕ ಮತ್ತೆ ಆ ಸ್ಥಳದಲ್ಲಿ ಕಸ ಹಾಕದಂತೆ ಸ್ಥಳೀಯರೆ ನಿಗಾವಹಿಸಿ ಸ್ವಚ್ಛವಾಗಿರುವಂತೆ ನೋಡಿಕೊಳ್ಳಬೇಕು. ಜೊತೆಗೆ ಜವಾಬ್ದಾರಿಯಿಂದ ಸ್ವಚ್ಛವಾಗಿರುವಂತೆ ನಿರ್ವಹಣೆ ಮಾಡಬೇಕು ಎಂದರು.

ಆಯುಕ್ತರು ರವರು ಮಾತನಾಡಿ, ಶಿವಾಜಿನಗರ ವ್ಯಾಪ್ತಿಯಲ್ಲಿ ಕಸವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವ ಹಾಗೂ ಕಸ ಸುರಿಯುವ ಸ್ಥಳ(ಬ್ಲಾಕ್ ಸ್ಪಾಟ್)ಗಳನ್ನು ತೆರವುಗೊಳಿಸಿ ಆ ಸ್ಥಳವನ್ನು ಸುಂದರೀಕರಣಗೊಳಿಸುವ ಕೆಲಸ ಮಾಡಲಾಗುತ್ತಿದೆ. ರಸ್ತೆ ಬದಿ ಕಸ ಸುರಿಯುವ ಸ್ಥಳಗಳನ್ನು ತೆರವು ಮಾಡಿ ಸುಂದರೀಕರಣ ಮಾಡಿದ ಬಳಿಕ ಸ್ಥಳೀಯ ನಾಗರಿಕರು ಮತ್ತೆ ಅಲ್ಲಿ ಕಸ ಸುರಿಯದೆ ಪ್ರತಿನತ್ಯ ಕಸ ಸಂಗ್ರಹಿಸಲು ಬರುವ ಆಟೋಗಳಿಗೆ ಕಸ ನೀಡಬೇಕು. ಇದು ಸಮುದಾಯದ ಜವಾಬ್ದಾರಿಯಾಗಿದ್ದು, ಎಲ್ಲರೂ ಕೈಜೋಡಿಸಿ ಕೆಲಸ ಮಾಡಿದರೆ ಕಸದ ಸಮಸ್ಯೆ ತ್ವರಿತವಾಗಿ ಬಗೆಹರಿಸಬಹುದು. ಆದ್ದರಿಂದ ನಿಮ್ಮ ಪ್ರದೇಶವನ್ನು ನೀವು ಸ್ವಚ್ಛವಾಗಿಟ್ಟುಕೊಳ್ಳಬೇಕು. ಶಿವಾಜಿನಗರದಲ್ಲಿ ಎಲ್ಲೂ ಬ್ಲಾಕ್ ಸ್ಪಾಟ್ ಇರದಂತೆ ಮಾಡುವ ಮೂಲಕ ಶಿವಾಜಿನಗರವನ್ನು ಒಂದು ಮಾದರಿ ವಿಧಾನಸಭಾ ಕ್ಷೇತ್ರವಾಗುವಂತೆ ಮಾಡಬೇಕು ಎಂದರು.